ನಿ-330
ಕ್ರ-47-[illegible]

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಶ್ರೀ ದಿನೇಶ್ ಗೂಳಿಗೌಡ ಹಾಗೂ ಶ್ರೀ ಮಧು ಜಿ.ಮಾದೇಗೌಡ ಇವರುಗಳು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ:**

**ವಿಷಯ:** ಸರ್ಕಾರಿ ಸ್ವಾಮ್ಯದ ಮೈ-ಶುಗರ್ ಸಕ್ಕರೆ ಕಾರ್ಖಾನೆಯಲ್ಲಿ ಪ್ರತಿ ನಿತ್ಯ ಕಡಿಮೆ ಪ್ರಮಾಣದ ಕಬ್ಬು ಅರೆಯುತ್ತಿರುವುದರಿಂದ ಕಾರ್ಖಾನೆಯು ನಷ್ಟದಲ್ಲಿದ್ದು, ಕಬ್ಬು ಸರಬರಾಜು ಮಾಡಿದ ರೈತರಿಗೆ ವಿಳಂಬವಾಗಿ ಹಣ ಪಾವತಿಸುತ್ತಿರುವುದರಿಂದ ಹಾಗೂ ಕೇಂದ್ರ ಸರ್ಕಾರ ಎಫ್.ಆರ್.ಪಿ ಕಡಿಮೆ ದರ ನಿಗದಿಪಡಿಸಿರುವುದರಿಂದ ಕಬ್ಬು ಬೆಳೆಗಾರರಿಗೆ ತುಂಬಾ ಅನ್ಯಾಯ ಉಂಟಾಗಿದೆ ಇದಕ್ಕೆ ರಾಜ್ಯ ಸರ್ಕಾರ ಪ್ರೋತ್ಸಾಹಧನ ನಿಗದಿಪಡಿಸಿದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಕೈಮಗ್ಗ, ಜವಳಿ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಸರ್ಕಾರದ ಉತ್ತರ**:

ದುಡಿಯುವ ಬಂಡವಾಳದ ಕೊರತೆ ಹಾಗೂ ಆರ್ಥಿಕ ಸಂಕಷ್ಟದಿಂದಾಗಿ ಮಂಡ್ಯದ ದಿ ಮೈಸೂರು ಷುಗರ್ ಕಾರ್ಖಾನೆಯಲ್ಲಿ 2018-19ನೇ ಹಂಗಾಮಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿತ್ತು.

ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 18.10.2021 ರಂದು ಜರುಗಿದ ಸಭೆಯಲ್ಲಿ ತೀರ್ಮಾನಿಸಿರುವಂತೆ ಹಾಗೂ 2022-23ನೇ ಸಾಲಿನ ಆಯವ್ಯಯ ಘೋಷಣಾ ಖಂಡಿಕೆ: 271ರಲ್ಲಿ ಘೋಷಿಸಿರುವಂತೆ ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿನ ಯಂತ್ರೋಪಕರಣಗಳ ದುರಸ್ತಿ, ಕಬ್ಬು ಕಟಾವು ಕಾರ್ಮಿಕರಿಗೆ ಮುಂಗಡ ಹಣ ಪಾವತಿ, ಬಗಾಸ್ ಖರೀದಿ, ಅವಶ್ಯಕವಿರುವ ಸಿವಿಲ್ ಮತ್ತು ವಿದ್ಯುತ್ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರದಿಂದ 2022-23ನೇ ಸಾಲಿನಲ್ಲಿ ಇದುವರೆವಿಗೂ ಒಟ್ಟು ರೂ. 32.58 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಹಿಂದಿನ 3 ಹಂಗಾಮುಗಳಿಂದ ಸ್ಥಗಿತಗೊಂಡಿದ್ದ ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ದುರಸ್ಥಿ ಕೆಲಸವನ್ನು ಮೇ-2022ರ ಅಂತ್ಯದಲ್ಲಿ ಪ್ರಾರಂಭಿಸಿ, ದಿನಾಂಕ:20-09-2022ರಂದು ಕಬ್ಬು ಅರೆಯುವ ಕಾರ್ಯಕ್ಕೆ ಚಾಲನೆಯನ್ನು ನೀಡಲಾಗಿರುತ್ತದೆ. ದಕ್ಷಿಣ ಕರ್ನಾಟಕ ಭಾಗದಲ್ಲಿ ಪ್ರತಿ ವರ್ಷ ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವುದನ್ನು ಜೂನ್-ಜುಲೈ ತಿಂಗಳಲ್ಲಿ ಪ್ರಾರಂಭ ಮಾಡುವುದು ವಾಡಿಕೆ ಇರುತ್ತದೆ. ಆದರೆ ಮೈಷುಗರ್ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು 3-4 ತಿಂಗಳ ಅವಧಿ ಬೇಕಾದ ಹಿನ್ನೆಲೆಯಲ್ಲಿ ಕಬ್ಬು ಕಟಾವು ಕಾರ್ಮಿಕರ ಕೊರತೆಯಿಂದಾಗಿ ಕಬ್ಬು ಪೂರೈಕೆಯಲ್ಲಿ ಅಡಚಣೆ ಉಂಟಾಗಿ ಕಡಿಮೆ ಪ್ರಮಾಣದಲ್ಲಿ ಕಬ್ಬು ಪೂರೈಕೆಯಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಪ್ರತಿ ದಿನ 5000 ಟಿ.ಸಿ.ಡಿ ಕಬ್ಬು ಅರೆಯುವ ಸಾಮರ್ಥ್ಯವನ್ನು ಹೊಂದಿರುವ ಸಕ್ಕರೆ ಘಟಕದಲ್ಲಿ, 800 ರಿಂದ 1000 ಮೆ.ಟನ್ ಕಬ್ಬನ್ನು ಅರೆಯಲಾಗುತ್ತಿದೆ. ದಿನಾಂಕ:20.09.2022ರಿಂದ 19-12-2022 ರವರೆಗೆ 1,639 ರೈತರು 78,040 ಮೆ.ಟನ್ ಕಬ್ಬನ್ನು ಮೈಸೂರು ಸಕ್ಕರೆ ಕಾರ್ಖಾನೆಗೆ ಸರಬರಾಜು ಮಾಡಿರುತ್ತಾರೆ.

ಈ ರೀತಿ ಕಾರ್ಖಾನೆಯಲ್ಲಿ ಕಡಿಮೆ ಪ್ರಮಾಣದ ಕಬ್ಬನ್ನು ಅರೆಯುವುದರಿಂದ ಸಹ-ವಿದ್ಯುತ್ ಘಟಕವನ್ನು ಪ್ರಾರಂಭಿಸಲು ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ವಿದ್ಯುತ್‌ನ್ನು ಆಮದು ಮಾಡಿಕೊಂಡು ಕಾರ್ಖಾನೆಯನ್ನು ನಡೆಸಬೇಕಾಗಿರುತ್ತದೆ ಹಾಗೂ ಕಡಿಮೆ ಪ್ರಮಾಣದ ಕಬ್ಬನ್ನು ಅರೆಯುತ್ತಿರುವುದರಿಂದ ಸಕ್ಕರೆ ಇಳುವರಿ ಮತ್ತು ಗುಣಮಟ್ಟವನ್ನು ಪಡೆಯಲು ಸಾಧ್ಯವಾಗುತ್ತಿಲ್ಲ. ಇದರಿಂದ, ಕಾಕಂಬಿ ಉತ್ಪಾದನಾ ಪ್ರಮಾಣ ಹೆಚ್ಚಾಗಿರುತ್ತದೆ. ಅಲ್ಲದೇ ಬಾಯ್ಲರ್‌ಗೆ ಅಗತ್ಯವಾದ ಬಗ್ಯಾಸ್ ಅನ್ನು ಕೂಡ ಹೆಚ್ಚುವರಿಯಾಗಿ ಸಮೀಪದ ಕಾರ್ಖಾನೆಗಳಿಂದ ಖರೀದಿ ಮಾಡಲಾಗುತ್ತಿದೆ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಗೆ ಪ್ರಸ್ತುತ ನಷ್ಟ ಸಂಭವಿಸುತ್ತಿದೆ.

ಕೇಂದ್ರ ಸರ್ಕಾರವು ದಿನಾಂಕ:17.08.2022ರ ಪತ್ರದಲ್ಲಿ 2022-23ನೇ ಸಕ್ಕರೆ ಹಂಗಾಮಿಗೆ ನಿಗದಿಪಡಿಸಿರುವ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ವಯ (ಎಫ್.ಆರ್.ಪಿ) ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ

ರೈತರಿಗೆ ಪಾವತಿಸಬೇಕಾದ ಕಬ್ಬಿನ ಬೆಲೆ ಕುರಿತು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇನಾಲಯದಿಂದ ದಿನಾಂಕ:18.10.2022ರಂದು ಆದೇಶ ಹೊರಡಿಸಲಾಗಿರುತ್ತದೆ.

ಮೈಸೂರು ಸಕ್ಕರೆ ಕಾರ್ಖಾನೆಯು ಹಿಂದಿನ 3 ಹಂಗಾಮುಗಳಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿದ್ದ ಹಿನ್ನೆಲೆಯಲ್ಲಿ, ಸದರಿ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಮೇಲ್ಕಂಡ ಆದೇಶದನ್ವಯ ಒಂದು ಟನ್ ಕಬ್ಬಿಗೆ ರೂ.2821.00ಗಳ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಪಾವತಿಸಬೇಕಾಗಿರುತ್ತದೆ. ಸದರಿ ಬೆಲೆಯನ್ವಯ ದಿನಾಂಕ: 19.12.2022ರವರೆಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಒಟ್ಟು ಮೊತ್ತ ಒಟ್ಟು ರೂ.21.81 ಕೋಟಿಗಳನ್ನು ಪಾವತಿಸಬೇಕಾಗಿರುತ್ತದೆ. ಈ ಮೊತ್ತದಲ್ಲಿ ಈಗಾಗಲೇ ರೂ.17.04 ಕೋಟಿಗಳನ್ನು ಪಾವತಿಸಲಾಗಿದ್ದು, ರೂ.4.75 ಕೋಟಿಗಳನ್ನು ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸುವುದು ಬಾಕಿ ಇರುತ್ತದೆ.

ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ 2013 ಹಾಗೂ ತಿದ್ದುಪಡಿ ಅಧಿನಿಯಮ 2014ರ ಕಲಂ 4(ಎ) ರಲ್ಲಿನ ಅವಕಾಶಗಳಂತೆ ದಿನಾಂಕ:05.12.2022ರ ಆದೇಶದಲ್ಲಿ ಎಥನಾಲ್ ಉತ್ಪಾದಿಸುವ ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಮೊದಲ ಕಂತಿನಲ್ಲಿ ಕೇಂದ್ರ ಸರ್ಕಾರವು 2022-23ನೇ ಸಾಲಿಗೆ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ (FRP) ಜೊತೆಗೆ ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.50.00 (ಐವತ್ತು ರೂಪಾಯಿಗಳು ಮಾತ್ರ) ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ. ಆದರೆ, ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಎಥನಾಲ್ ಘಟಕವು ಇಲ್ಲದಿರುವುದರಿಂದ ಸದರಿ ಆದೇಶವು ಈ ಕಾರ್ಖಾನೆಗೆ ಕಬ್ಬನ್ನು ಸರಬರಾಜು ಮಾಡಿದ ರೈತರಿಗೆ ಅನ್ವಯಿಸುವುದಿಲ್ಲ.

ಕಾರ್ಖಾನೆಯ ಸಕ್ಕರೆ ಘಟಕದ ಸಾಮರ್ಥ್ಯಕ್ಕೆ ಅನುಗುಣವಾಗಿ ಕಬ್ಬನ್ನು ಸರಬರಾಜು ಮಾಡಲು 2023-24ನೇ ಹಂಗಾಮಿನಲ್ಲಿ ಮುಂಚಿತವಾಗಿ ಕಬ್ಬು ಕಟಾವು ಮೇಸ್ತ್ರಿ ಮತ್ತು ಕಾರ್ಮಿಕರನ್ನು ವ್ಯವಸ್ಥೆ ಮಾಡಿಕೊಳ್ಳಲಾಗುವುದು.

ಸಕ್ಕರೆ ಇಳುವರಿಯನ್ನು ಹಾಗೂ ಗುಣಮಟ್ಟವನ್ನು ಉತ್ತಮಪಡಿಸುವುದಕ್ಕಾಗಿ ಹಳೆಯ ಯಂತ್ರೋಪಕರಣಗಳನ್ನು ಬದಲಾಯಿಸಲು ಹಾಗೂ ಅಗತ್ಯವಿರುವ ಕಾಮಗಾರಿಗಳನ್ನು ಕೈಗೊಳ್ಳುವುದಕ್ಕಾಗಿ ಮೈಸೂರು ಸಕ್ಕರೆ ಕಾರ್ಖಾನೆಗೆ ರೂ.23.25 ಕೋಟಿಗಳನ್ನು ಮಂಜೂರು ಮಾಡುವಂತೆ ಕಂಪನಿಯಿಂದ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾಗಿದ್ದು, ಪ್ರಸ್ತುತ ಸದರಿ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

---

ಸಿಐ 265 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು